ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ    ದಿನಾಂಕ : DATE : 29/04/2019

# ಮಾಜಿ ಶಾಸಕ ಡಾ.ಎನ್.ಬಿ. ನಂಜಪ್ಪ ನಿಧನ

ಪ್ರ.ವಾ. 29/4/19

ಚನ್ನರಾಯಪಟ್ಟಣ: ಅನಾರೋಗ್ಯದಿಂದ ಬಳಲುತ್ತಿದ್ದ ಶ್ರವಣಬೆಳಗೊಳ ಕ್ಷೇತ್ರದ ಮಾಜಿ ಶಾಸಕ ಡಾ. ಎನ್.ಬಿ. ನಂಜಪ್ಪ (89) ಶನಿವಾರ ರಾತ್ರಿ ಹಾಸನದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.



ನಂಜಪ್ಪ

ಪುತ್ರ, ವೈದ್ಯ ಡಾ. ರವೀಂದ್ರನಾಥ್, ಪುತ್ರಿ ಡಾ.ಭಾರತಿ ಇದ್ದಾರೆ. ಭಾನುವಾರ ಮಧ್ಯಾಹ್ನ ಸ್ವಗ್ರಾಮ ನೇರಲಕೆರೆಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಪುತ್ರಿ ಭಾರತಿ ತಿಳಿಸಿದರು.

ಇವರು ಚನ್ನರಾಯಟ್ಟಣ ತಾಲ್ಲೂಕು ನುಗ್ಗೇಹಳ್ಳಿ ಹೋಬಳಿ ನೇರಲಕೆರೆ ಗ್ರಾಮದವರು. ಕೋಲ್ಕತ್ತದ ವೈದ್ಯಕೀಯ ಕಾಲೇಜಿನಲ್ಲಿ ವೈದ್ಯಕೀಯ ವ್ಯಾಸಂಗ ಮಾಡಿ ಹುಬ್ಬಳ್ಳಿ ವೈದ್ಯಕೀಯ ಕಾಲೇಜಿನಲ್ಲಿ ಕೆಲ ವರ್ಷ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದರು. ಊಟಿಯಲ್ಲಿ ಹಲವು ವರ್ಷ ವೈದ್ಯರಾಗಿ ಕಾರ್ಯನಿರ್ವಹಿಸಿದ್ದ ಅವರು ಚನ್ನರಾಯಪಟ್ಟಣಕ್ಕೆ ಹಿಂತಿರುಗಿ ರಾಜಕಾರಣಕ್ಕೆ ಧುಮುಕಿದ್ದರು.

1985 ರಲ್ಲಿ ಕಾಂಗ್ರೆಸ್ ಪಕ್ಷದಿಂದ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಿ ಸೋಲು ಅನುಭವಿಸಿದರು. 1989ರಲ್ಲಿ ಮತ್ತೆ ಸ್ಪರ್ಧಿಸಿ ಗೆಲುವು ಸಾಧಿಸಿದರು. ಕಾಂಗ್ರೆಸ್ ಪಕ್ಷ ತ್ಯಜಿಸಿ ಬಿಜೆಪಿಗೆ ಸೇರಿದ್ದರು. ಪುನಃ ಕಾಂಗ್ರೆಸ್‌ಗೆ ಮರಳಿದ್ದರು.